ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ರಾಜ್ಯದ ಕೈಗಾರಿಕೆಗಳು ಚೀನಾ ದೇಶದಿಂದ ಆಮದು ಮಾಡಿಕೊಳ್ಳುವ ಉತ್ಪನ್ನಗಳ ಬಗ್ಗೆ

ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :-

962(1088) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿನ ಕೈಗಾರಿಕೆಗಳು ಪ್ರಸ್ತುತ ಚೀನಾ ದೇಶದಿಂದ ಎಷ್ಟು ಉತ್ಪನ್ನಗಳನ್ನು ಮತ್ತು ಬಿಡಿ ಸಾಮಗ್ರಿಗಳನ್ನು ಆಮದು ಮಾಡಿಕೊಳ್ಳುತ್ತಿವೆ; ಮತ್ತು ಅವುಗಳ ಮೊತ್ತವೆಷ್ಟು; (ವಿವರ ನೀಡುವುದು)

(ಆ) ಪ್ರಸ್ತುತ ಚೀನಾ ದೇಶದಿಂದ ಆಮದು ಪ್ರಕ್ರಿಯೆಗೆ ಕೇಂದ್ರ ಸರ್ಕಾರ ನಿರ್ಬಂಧ ವಿಧಿಸಿದಲ್ಲಿ ಅಥವಾ ಆಮದು ಶುಲ್ಕ ಹೆಚ್ಚಿಸಿದ್ದಲ್ಲಿ ರಾಜ್ಯದಲ್ಲಿನ ಕೈಗಾರಿಕೆಗಳ ಪರಿಸ್ಥಿತಿ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ; (ವಿವರ ನೀಡುವುದು)

(ಇ) ಆ ಆಮದು ತಡೆ ಪ್ರಕ್ರಿಯೆಯಿಂದ ನಷ್ಟ ಅನುಭವಿಸುವ ಕೈಗಾರಿಕೆಗಳನ್ನು ಉತ್ತೇಜಿಸಿ, ನಿರುದ್ಯೋಗದ ಪ್ರಮಾಣವನ್ನು ಕಡಿಮೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ? (ವಿವರ ನೀಡುವುದು)